## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.170-2017** **ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಸಿದ್ದೇಗೌಡ<br>ಶಿರಮಳ್ಳಿ ಗ್ರಾಮ, ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 23-02-2024.** |

**<u>ಪಾಟೀ ಸವಾಲುಃ ಪ್ರತಿವಾದಿಗಳ ಪರ ಶ್ರೀ ಹೆಚ್.ಎನ್.ಎಂ ವಕೀಲರಿಂದಃ</u>**

ದಾವಾ ಷೆಡ್ಯೂಲ್ ಸ್ವತ್ತು ಕರಿಗೌಡ ರವರ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ಕರಿಗೌಡ ರವರ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿ. ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಕರಿಗೌಡ ರವರ ಖಾತೆ ಕಂದಾಯವನ್ನು ಪಾವತಿ ಮಾಡುತ್ತಿರುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ನಾವು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇರುತ್ತೇವೆ ಎಂದು ನುಡಿಯುತ್ತಾರೆ. ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ನನಗಾಗಲಿ, ನನ್ನ ವಾಸರುದಾರರಿಗಾಗಲಿ ಯಾವುದೇ ಹಕ್ಕಾಗಲಿ ಅಧಿಕಾರವಾಗಲಿ ಇರುವುದಿಲ್ಲ ಎಂದರೆ ಸರಿಯಲ್ಲ. ನನಗೆ ದಾವಾ ಷೆಡ್ಯೂಲ್ ಸ್ವತ್ತಿನ ಸರ್ವೇ ನಂಬರ್ ಗೊತ್ತಿಲ್ಲ. ಸಾಕ್ಷಿ ಮುಂದುವರೆದು ದಾವಾ ಷೆಡ್ಯೂಲ್ ಸ್ವತ್ತಿನ ಸರ್ವೆ ನಂಬರ್ 130 ಎಂದು ನುಡಿಯುತ್ತಾರೆ. ಸ್ವತ್ತಿನ ಸರ್ವೆ ನಂ.130 ರ ಮಾಲೀಕರು ಕರಿಗೌಡ ರವರಾಗಿರುತ್ತಾರೆ. ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಖಾತೆ ಬದಲಾವಣೆ ಮಾಡಿಕೊಡುವಂತೆ ನಾನು ಕಂದಾಯ ಇಲಾಖೆಗೆ ಅರ್ಜಿ ಸಲ್ಲಿಸಿದ್ದು ಅದು ವಜಾಗೊಂಡಿರುತ್ತದೆ ಎಂದರೆ ಸರಿಯಲ್ಲ. ನಾನು ಮೈಸೂರಿನ ಮಾನ ಉಪ-ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದೆನು ಎಂದರೆ ಸರಿ. ಸದರಿ ಮೇಲ್ಮನವಿಯೂ ಸಹ ವಜಾಗೊಂಡಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಖಾತೆ ಮಾಡುವಂತೆ ಆದೇಶವಾಗಿರುತ್ತದೆ ಎಂದು ನುಡಿಯುತ್ತಾರೆ. ಸದರಿ ಆದೇಶದ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

2. ದಾವಾ ಷೆಡ್ಯೂಲ್ ನಲ್ಲಿ ನಮೂದಾಗಿರುವ ಚೆಕ್ಕುಬಂದಿ ತಪ್ಪಾಗಿರುತ್ತದೆ ಎಂದರೆ ಸರಿಯಲ್ಲ. ನಾನು ವಾದ ಪತ್ರದಲ್ಲಿ ಹೇಳಿರುವಂತೆ ಪ್ರತಿವಾದಿಗಳನ್ನು ಕ್ರಯ ಪತ್ರವನ್ನು ತಿದ್ದುಪಡಿ ಮಾಡಿಕೊಡುವಂತೆ ಕೋರಿರುವುದಿಲ್ಲ ಎಂದರೆ ಸರಿಯಲ್ಲ ನಾನು ಪ್ರತಿವಾದಿಯವರಿಗೆ ವಕೀಲರ ಮೂಲಕ ತಿಳುವಳಿಕೆ ನೀಡಿಸಿದ್ದೆನು ಎಂದರೆ ಸರಿಯಲ್ಲ. ನಾನು ನೀಡಿಸಿದ್ದ ತಿಳುವಳಿಕೆಗೆ ಪ್ರತಿವಾದಿಗಳು ಪ್ರತ್ಯುತ್ತರವನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಷೆಡ್ಯೂಲ್ ಸ್ವತ್ತು ಕರಿಗೌಡರಿಗೆ ಸೇರಿದ್ದಾಗಿರುವುದರಿಂದ ಸದರಿ ಸ್ವತ್ತಿನ ಮೇಲೆ ನಮಗೆ ಯಾವುದೇ ಹಕ್ಕು ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ರೂ.200/– ಗಳಿಗೆ ನಮಗೆ ಕ್ರಯಪತ್ರವನ್ನು ಬರೆದುಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ ನಿಪಿ–1 ರಲ್ಲಿ ನಮೂದಾಗಿರುವ ಷೆಡ್ಯೂಲ್ ಸ್ವತ್ತಿಗೂ ದಾವಾ ಷೆಡ್ಯೂಲ್ ಸ್ವತ್ತಿಗೂ ಸಂಬಂಧ ಇರುವುದಿಲ್ಲ, ನಿಪಿ–1 ರ ಷೆಡ್ಯೂಲ್ ನಲ್ಲಿ ನಮೂದಾಗಿರುವ ಸ್ವತ್ತೇ ಬೇರೆ, ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ನಮೂದಾಗಿರುವ ಸ್ವತ್ತೇ ಬೇರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಿಪಿ–1 ರಲ್ಲಿ ದಾವಾ ಸರ್ವೇ ನಂಬರ್ 131 ಎಂದು ನಮೂದಾಗಿರುತ್ತದೆ ಎಂದು ನುಡಿಯುತ್ತಾರೆ. ಸರ್ವೇ ನಂ.131 ರ ಸ್ವತ್ತು ಮಾದೇಗೌಡರಿಗೆ ಸೇರಿದ್ದಾಗಿದ್ದು, ಅವರನ್ನು ಈ ದಾವೆಯ ಪಕ್ಷಕಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಅವರ ಸ್ವತ್ತೇ ಬೇರೆ ಎಂದು ನುಡಿಯುತ್ತಾರೆ. ದಾವಾ ಷೆಡ್ಯೂಲ್ ಸ್ವತ್ತು ಕರಿಗೌಡ ರವರ ಪಿತ್ರಾರ್ಜಿತ ಸ್ವತ್ತಾಗಿರುವುದರಿಂದ ನನಗೆ ಕ್ರಯ ಪತ್ರವನ್ನು ತಿದ್ದುಪಡಿ ಮಾಡಿಕೊಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದರೆ ಸರಿಯಲ್ಲ.

(ಮುಂದುವರೆದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯಾವಕಾಶವನ್ನು ಕೋರಿದ್ದು ಸಮಯಾವಕಾಶವನ್ನು ನೀಡಲಾಯಿತು)

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**